5. S. Bhaskar Rao, D.I.G. Railways, Bangalore.
6. Ajay Kumar Singh, Central Deputation (Director, Vigillance, Railway Board)
7. Subhash Bharani, DIG., Central Range, Bangalore.
8. N. Achutha Rao, Commr. of Police, Hubli-Dharwad
9. C. Moti Ram, Dy. Commissioner of Police, Crime, Bangalore.
10. K.V. Gangadeep, D.C.P., (Intelligence), Bangalore.
11. N.S. Meghrik, S.P.A. Kodagu.
12. P. Ravindranath, A.S.P., Bellary.
13. T. Sunil Kumar, A.S.P. Humanabad.
14. Smt. Archana N. Sondawala, A.S.P., Bidar.
15. T.G. Doraiswamy Naik, S.P., Kolar.
16. Dr. S. Parasiva Murthy, Undergoing Training of Dharwad.

S.T. Officers

1. S.T. Sangliyan, : I.G.P., Divisional Organiser, S.S.B., Manipur.
2. Pachau, L. : D.I.G., Intellence, Bangalore.
3. Dharamapal Negi : Dy. Director, Fire Force, Bangalore.
4. Kempaiah : D.C.P. Bangalore.
5. Premshankar Meena : S.P., Lokayukta, Mysore.

ಶಿರಹಟ್ಟಿ ತಾಲ್ಲೂಕು ಮುಕ್ತಿ ಮಂದಿರ ಧರ್ಮಕ್ಷೇತ್ರ ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿ

1258 (1622): ಶ್ರೀ ಪಿ.ಸಿ. ಸಿದ್ದನಗೌಡರ್ (ಕಲ್ಘಟಗಿ):–

ಮಾನ್ಯ ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಧಾರವಾಡ ಜಿಲ್ಲೆ ಶಿರಹಟ್ಟಿ ತಾಲ್ಲೂಕು ಮುಕ್ತಿ ಮಂದಿರ ಧರ್ಮ ಕ್ಷೇತ್ರಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಯಾತ್ರಾರ್ಥಿಗಳು ಬರುತ್ತಿರುವ ಸಂಗತಿ ಸರ್ಕಾರಕ್ಕೆ ತಿಳಿದಿದೆಯೇ;

ಆ. ಬರುವ ಯಾತ್ರಾರ್ಥಿಗಳಿಗೆ ಇಲ್ಲಿ ಯಾವುದೇ ಸೌಲಭ್ಯ ಇಲ್ಲದೆ ಇರುವುದು ಗೊತ್ತಿದೆಯೇ;

ಇ. ಹಾಗಿದ್ದಲ್ಲಿ ಈ ಧರ್ಮ ಕ್ಷೇತ್ರವನ್ನು ಒಂದು ಪ್ರವಾಸಿ ಕೇಂದ್ರವನ್ನಾಗಿ ಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ;

ಈ. ಇದ್ದಲ್ಲಿ ಯಾವಾಗ ಮಾಡುವಿರಿ ಹಾಗೂ ಎಂದಿನಿಂದ ಪ್ರಾರಂಭಿಸುವರೇ ?

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ

ಸಚಿವರು):–

ಎ. ಹೌದು.

ಆ.ಹೌದು.

ಇ. ಈ ಮುಕ್ತಿ ಮಂದಿರ ಧರ್ಮ ಕ್ಷೇತ್ರವು ಕರ್ನಾಟಕ ಪ್ರವಾಸೋದ್ಯಮ ನೀತಿಯಲ್ಲಿ 'ಬಿ' ಗುಂಪಿನಡಿ ಬರುವುದು. ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳುವಂತೆ ಖಾಸಗಿ ಉದ್ಯಮಿಗಳನ್ನು ಉತ್ತೇಜಿಸುವುದೇ ಸರ್ಕಾರದ ನೀತಿಯಾಗಿದೆ. ಇಲ್ಲಿ ಪ್ರವಾಸೋದ್ಯಮ ಯೋಜನೆಗಳನ್ನು ಕೈಗೊಳ್ಳಲು ಮುಂದೆ ಬರುವ ಖಾಸಗಿ ಉದ್ಯಮಿಗಳಿಗೆ ಬಂಡವಾಳ ಹೂಡಿಕೆ ಮೇಲೆ ಶೇಕಡ 20 ಸಬ್ಸಿಡಿ, ಇತರ ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲಾಗುವುದು.

ಕುಂದಗೋಳ್ ತಾಲ್ಲೂಕು ಶಿಶುನಾಳ ಗ್ರಾಮವನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿ

1259 (1623): ಮಾನ್ಯ ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಎ. ಸಂತ ಶಿಶುನಾಳ ಷರೀಫರ ಜನ್ಮ ಸ್ಥಳವಾದ ಶಿಶುನಾಳ ಗ್ರಾಮಕ್ಕೆ ಬರುವ ಪ್ರವಾಸಿಗರಿಗೆ ಹಾಗೂ ಭಕ್ತಾದಿಗಳಿಗೆ ಇಲ್ಲಿ ಯಾವುದೇ ಸೌಲಭ್ಯ ಮತ್ತು ಸೌಕರ್ಯ ಇಲ್ಲದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದಲ್ಲಿ, ಆ ಸ್ಥಳವನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿ ಪಡಿಸುವ ಯೋಜನೆ ಸರ್ಕಾರಕ್ಕೆ ಇದೆಯೇ;

ಇ. ಇದ್ದಲ್ಲಿ, ಯಾವಾಗ ಮಾಡುವಿರಿ, ಇಲ್ಲದಿದ್ದರೆ ಕಾರಣವೇನು ?

ಶ್ರೀ ಪೆರಿಕಲ್ ಏಂ. ಮಲ್ಲಪ್ಪ (ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಕುಂದು ಕೊರತೆಗಳ ರಾಜ್ಯ ಸಚಿವರು):–

ಎ. ಹೌದು.

ಆ, ಇ. ಶಿಶುನಾಳ ಗ್ರಾಮ ಕರ್ನಾಟಕ ಪ್ರವಾಸೋದ್ಯಮ ನೀತಿಯಲ್ಲಿ 'ಬಿ' ಗುಂಪಿನಡಿ ಬರುತ್ತದೆ. ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಯೋಜನೆಗಳನ್ನು ಕೈಗೊಳ್ಳುವಂತೆ ಖಾಸಗಿ ಉದ್ಯಮಿಗಳನ್ನು ಉತ್ತೇಜಿಸುವುದು ಸರ್ಕಾರದ ನೀತಿಯಾಗಿದೆ. ಇಲ್ಲಿ ಪ್ರವಾಸೋದ್ಯಮ ಯೋಜನೆಗಳನ್ನು ಕೈಗೊಳ್ಳುವ ಖಾಸಗಿ ಉದ್ಯಮಿಗಳಿಗೆ ಬಂಡವಾಳ ಹೂಡಿಕೆ ಮೇಲೆ ಶೇಕಡ 20 ಸಬ್ಸಿಡಿ ಹಾಗೂ ಇತರ ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲಾಗುವುದು.

ಕಲಘಟಗಿಯಲ್ಲಿ ಕ್ರೀಡಾಂಗಣ ಮಂಜೂರಾತಿ

1260 (1624): ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ):–

ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಎ. ಕಲಘಟಗಿ ಪಟ್ಟಣದಲ್ಲಿ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಆಟವಾಡಲು ಒಂದು ಕ್ರೀಡಾಂಗಣ